ಕನ್ನಡಪ್ರಭ

# ಪೊಲೀಸ್ ಮಕ್ಕಳ ಕ್ರೀಡಾ ತರಬೇತಿ ಪ್ರಾಯೋಜಿತ ಕೊಡಿಸಲು ಸಿದ್ಧ!

## ವಸತಿ ನಿಲಯ ಕಾಮಗಾರಿಗೆ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಭೂಮಿಪೂಜೆ



ವಸತಿ ನಿಲಯ ಹಾಗೂ ಭೋಜನಾಲಯದ ಕಾಮಗಾರಿ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಭೂಮಿಪೂಜೆ ನೆರವೇರಿಸಿದರು.

• **ಕನ್ನಡಪ್ರಭ ವಾರ್ತೆ** ಧಾರವಾಡ

ಪ್ರತಿಭೆ ಬರೀ ಅಂಕಗಳಿಗೆ ಸೀಮಿತ ಅಲ್ಲ. ಕ್ರೀಡೆ, ಹಾಡು, ಚಿತ್ರಕಲೆ ಅಂತಹ ಅನೇಕ ವಿಷಯಗಳ ಆಸಕ್ತಿ ಗುರುತಿಸಿ ಮಗುವಿಗೆ ತರಬೇತಿ ನೀಡಿದರೆ ಮಗು ತನ್ನ ಕ್ಷೇತ್ರದಲ್ಲಿ ದೊಡ್ಡ ಮಟ್ಟದ ಸಾಧನೆ ಮಾಡಬಲ್ಲದು. ಅಂತೆಯೇ, ಪೊಲೀಸ್ ಮಕ್ಕಳ ವಸತಿ ಶಾಲೆಯ ವಿದ್ಯಾರ್ಥಿಗಳಿಗೆ ರಾಷ್ಟ್ರೀಯ ಮಟ್ಟದ ಕ್ರೀಡಾ ತರಬೇತಿ ನೀಡಲು ಪ್ರಾಯೋಜಿತ ಕೊಡಿಸಲು ತಾವು ಸಿದ್ಧ ಎಂದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಹೇಳಿದರು.

ಇಲ್ಲಿಯ ಪೊಲೀಸ್ ಹೆಡ್‌ಕ್ವಾರ್ಟ್‌ಸ್‌ನಲ್ಲಿರುವ ಪೊಲೀಸ್ ಮಕ್ಕಳ ವಸತಿ ಶಾಲೆಗೆ ಕೋಕ್ ಇಂಡಿಯಾ ಕಂಪನಿಯ ಸಹಕಾರದಲ್ಲಿ ₹2 ಕೋಟಿ ವೆಚ್ಚದಲ್ಲಿ ವಸತಿ ನಿಲಯ ಹಾಗೂ ಭೋಜನಾಲಯದ ಭೂಮಿಪೂಜೆ ನೆರವೇರಿಸಿದ ಅವರು, ವಸತಿ ಶಾಲೆ ಇರುವ ಕಾರಣ ಕ್ರೀಡೆಯಲ್ಲಿ ಆಸಕ್ತಿ ತೋರಿದರೆ ಗುಣಮಟ್ಟದ ತರಬೇತಿ ನೀಡಲು ವ್ಯವಸ್ಥೆ ಮಾಡುವುದಾಗಿ ಜೋಶಿ ಭರವಸೆ ನೀಡಿದರು.

ಜಗತ್ತಿನಲ್ಲಿ ಭಾರತ ದೇಶ ಕ್ರೀಡೆಯಲ್ಲಿ ಸಾಧನೆ ಮಾಡಬೇಕು ಎಂಬುದೇ ಪ್ರಧಾನಿ ಮೋದಿ ಅವರ ಗುರಿ. ಅವರ ಗುರಿ ಈಡೇರಿಸಲು ಪ್ರತಿಯೊಂದು ಅವಕಾಶವನ್ನು ನಾವು ಬಳಸಿಕೊಳ್ಳಬೇಕಿದೆ. ಈಗಾಗಲೇ ಜಾರ್ಖಂಡ್‌ನಲ್ಲಿ ₹350 ಕೋಟಿ ವೆಚ್ಚದಲ್ಲಿ ವಿಶೇಷವಾಗಿ ಕ್ರೀಡಾ ಶಾಲೆ ಸ್ಥಾಪಿಸಲಾಗಿದೆ. ಒಂದು ಹೊತ್ತು ಮಾತ್ರ ಅಧ್ಯಯನ ಇದ್ದು, ನಂತರದಲ್ಲಿ ಇಡೀ ದಿನ ಮಕ್ಕಳು ತಮಗಿಷ್ಟವಾದ ಕ್ರೀಡಾ ತರಬೇತಿ ಪಡೆಯುತ್ತಿದ್ದಾರೆ. ಹುಬ್ಬಳ್ಳಿಯಲ್ಲಿ ಸ್ಮಾರ್ಟ್ ಸಿಟಿ ಯೋಜನೆಯಲ್ಲಿ ಹಾಗೂ ಧಾರವಾಡದಲ್ಲಿ ಸಿಎಸ್‌ಆರ್ ಅನುದಾನದಲ್ಲಿ ಅತ್ಯಂತ ದೊಡ್ಡ ಒಳಾಂಗಣ ಕ್ರೀಡಾಂಗಣ ಸ್ಥಾಪಿಸಲಾಗುತ್ತಿದೆ. ಕ್ರೀಡೆಯಲ್ಲೂ ಸ್ಥಳೀಯ ಮಕ್ಕಳಿಗೆ ಪ್ರೋತ್ಸಾಹ ನೀಡುವ ಮೂಲಕ ಸಾಧನೆಗೆ ನಾವು ಕಾರಣರಾಗಬೇಕಿದೆ ಎಂದರು.

ಪ್ರಸ್ತುತ ಜಗತ್ತಿಗೆ ಮಾನವ ಸಂಪನ್ಮೂಲದ ಅಗತ್ಯ ಹೆಚ್ಚಿದೆ. ಕೆಲಸಕ್ಕೆ ಕೌಶಲ್ಯ ಹೊಂದಿದವರ ಸಂಖ್ಯೆ ಕಡಿಮೆ ಇದೆ. ಆದರೆ, ಭಾರತದಲ್ಲಿ ಜನಸಂಖ್ಯೆ ಜೊತೆಗೆ ಕೌಶಲ್ಯವೂ ಇದೆ. ಹೀಗಾಗಿ 5ನೇ ಆರ್ಥಿಕ ಶಕ್ತಿ ಹಾಗೂ ವಿದೇಶಿ ವಿನಿಮಯಲ್ಲಿ 4ನೇ ಸ್ಥಾನದಲ್ಲಿದ್ದೇವೆ. ಸುರಕ್ಷತೆ ದೃಷ್ಟಿಯಿಂದ ಬೇರೆ ದೇಶದಲ್ಲಿಟ್ಟದ ಬಂಗಾರವನ್ನು ಮರಳಿ ನಮ್ಮಲ್ಲಿ ತರಲಾಗುತ್ತಿದೆ. ಇನ್ನೆರೆಡು ವರ್ಷಗಳಲ್ಲಿ ನಾವು 3ನೇ ಆರ್ಥಿಕ ಶಕ್ತಿಯಾಗಿ ಬೆಳೆಯಲಿದ್ದೇವೆ. ಹೀಗಾಗಿ ಮಾನವ ಸಂಪನ್ಮೂಲ ಉಳಿಸಿ ಬೆಳೆಸಲು ಶಿಕ್ಷಣ, ಕ್ರೀಡೆ ಅಂತಹ ಕ್ಷೇತ್ರಗಳಲ್ಲಿನ ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಾಹಿಸುವ ಅಗತ್ಯವಿದೆ. ಕೇಂದ್ರ ಸರ್ಕಾರ ಇದಕ್ಕಾಗಿ ಸಾಕಷ್ಟು ವೆಚ್ಚ ಸಹ ಮಾಡಲಿದೆ ಎಂದು ಜೋಶಿ ಹೇಳಿದರು.

> **ಹುಬ್ಬಳ್ಳಿಯಲ್ಲಿ ಸ್ಮಾರ್ಟ್ ಸಿಟಿ ಯೋಜನೆಯಲ್ಲಿ ಹಾಗೂ ಧಾರವಾಡದಲ್ಲಿ ಸಿಎಸ್‌ಆರ್ ಅನುದಾನದಲ್ಲಿ ಅತ್ಯಂತ ದೊಡ್ಡ ಒಳಾಂಗಣ ಕ್ರೀಡಾಂಗಣ ಸ್ಥಾಪಿಸಲಾಗುತ್ತಿದೆ. ಕ್ರೀಡೆಯಲ್ಲೂ ಸ್ಥಳೀಯ ಮಕ್ಕಳಿಗೆ ಪ್ರೋತ್ಸಾಹ ನೀಡುವ ಮೂಲಕ ಸಾಧನೆಗೆ ನಾವು ಕಾರಣರಾಗಬೇಕಿದೆ.**
>
> • **ಪ್ರಹ್ಲಾದ ಜೋಶಿ** ಕೇಂದ್ರ ಸಚಿವ

ಶಾಸಕ ಅರವಿಂದ ಬೆಲ್ಲದ ಮಾತನಾಡಿ, ಸದ್ಯ ಪೊಲೀಸ್ ಮಕ್ಕಳ ವಸತಿ ಶಾಲೆಯಲ್ಲಿ ಬರೀ ಪೊಲೀಸರ ಮಕ್ಕಳಿದ್ದು ಬೇರೆ ಮಕ್ಕಳು ಹಾಗೂ ಬಾಲಕಿಯರಿಗೂ ಅವಕಾಶ ಸಿಗುವಂತೆ ಪೊಲೀಸ್ ಇಲಾಖೆ ತೀರ್ಮಾನ ಕೈಗೊಳ್ಳಬೇಕು. ಜೊತೆಗೆ ಆಡಳಿತದಲ್ಲಿ ಪೊಲೀಸ್ ಅಧಿಕಾರಿಗಳು ಮಾತ್ರವಲ್ಲದೇ ಶಿಕ್ಷಣ ತಜ್ಞರನ್ನು ಬಳಸಿಕೊಳ್ಳಲು ಮತ್ತು ಪ್ರವೇಶಾತಿ ಹೆಚ್ಚಿಸಲು ಎಸ್ಪಿ ಅವರಿಗೆ ಸಲಹೆ ನೀಡಿದರು. ಅಧ್ಯಕ್ಷತೆ ವಹಿಸಿದ್ದ ವಿಪ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, ಈ ಹಿಂದಿನ ಕೆಲ ಪೊಲೀಸ್ ಹಿರಿಯ ಅಧಿಕಾರಿಗಳ ಕುತಂತ್ರದಿಂದ ಶಾಲೆ ಬಂದ್ ಆಗುವ ಹಂತಕ್ಕೆ ಬಂದಿತ್ತು. ನಮ್ಮ ಪ್ರಯತ್ನದಿಂದ ಶಾಲೆಯನ್ನು ಉಳಿಸಿಕೊಳ್ಳಲಾಗಿದೆ. ಬೇರೆ ಮಕ್ಕಳಿಗೂ ಇಲ್ಲಿ ಪ್ರವೇಶಾವಕಾಶ ನೀಡುವ ಮೂಲಕ ಪ್ರವೇಶಾತಿ ಹೆಚ್ಚಿಸಲು ಸೂಚಿಸಿದರು. ಶಾಸಕ ಎನ್.ಎಚ್. ಕೋನರಡ್ಡಿ ಮಾತನಾಡಿದರು. ಪೊಲೀಸ್ ವರಿಷ್ಠಾಧಿಕಾರಿ ಗೋಪಾಲ ಬ್ಯಾಕೋಡ್, ಮಾಜಿ ಶಾಸಕ ಅಮೃತ ದೇಸಾಯಿ, ಹುಡಾ ಅಧ್ಯಕ್ಷ ಶಾಕೀರ ಸನದಿ ಮತ್ತಿತರರು ಇದ್ದರು.


Powered by: erelego.com

ಕನ್ನಡಪ್ರಭ

# ಅನುದಾನ ರಹಿತ ಶಿಕ್ಷಕರಿಗೆ ನ್ಯಾಯದ ಭರವಸೆ

## ಕನ್ನಡ ಶಾಲೆ ಉಳಿಸಿ ಅಭಿಯಾನದ ಸಮಾವೇಶದಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಹೇಳಿಕೆ



ನಮ್ಮ ಕನ್ನಡ ಶಾಲೆ ಉಳಿಸಿ ಅಭಿಯಾನದ ರಾಜ್ಯಮಟ್ಟದ ಸಮಾವೇಶವನ್ನು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಉದ್ಘಾಟಿಸಿದರು.

**ಬೆಳಗಾವಿ ಅಧಿವೇಶನದಲ್ಲಿ ಪಕ್ಷಾತೀತವಾಗಿ ವಿಧಾನ ಪರಿಷತ್ತಿನ ಎಲ್ಲ ಸದಸ್ಯರನ್ನು ಒಗ್ಗೂಡಿಸಿ ಈ ಬಗ್ಗೆ ಧ್ವನಿ ಎತ್ತುವ ಕೆಲಸ ಮಾಡುತ್ತೇವೆ. ಚರ್ಚೆಗಾಗಿ ಸಭಾಪತಿಗೆ ನಿಯಮದ ಪ್ರಕಾರ ಪ್ರಸ್ತಾವನೆ ಕಳುಹಿಸಿ ಬೇಡಿಕೆ ಈಡೇರಿಸುವ ನಿಟ್ಟಿನಲ್ಲಿ ಕೆಲಸ ಮಾಡುತ್ತೇವೆ.**

• **ಎಸ್.ವಿ. ಸಂಕನೂರು** ವಿಪ ಸದಸ್ಯ

• **ಕನ್ನಡಪ್ರಭ ವಾರ್ತೆ** ಹುಬ್ಬಳ್ಳಿ

ಅನುದಾನ ರಹಿತ ಶಿಕ್ಷಕರ ಸಮಸ್ಯೆಗಳ ಬಗ್ಗೆ ಬೆಳಗಾವಿ ಅಧಿವೇಶನದ ವೇಳೆ ಮುಖ್ಯಮಂತ್ರಿ, ಶಿಕ್ಷಣ ಸಚಿವರೊಂದಿಗೆ ಚರ್ಚಿಸುತ್ತೇನೆ. ನಿಮ್ಮ ಸಮಸ್ಯೆ ಬಗೆಹರಿಸುವ ಪ್ರಯತ್ನ ಮಾಡುತ್ತೇನೆಂದು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಇಲ್ಲಿನ ಬಿವಿಬಿ ಬಯೋಟೆಕ್ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಅನುದಾನರಹಿತ ಶಾಲಾ ಕಾಲೇಜುಗಳ ಆಡಳಿತ ಮಂಡಳಿಗಳ ಮತ್ತು ನೌಕರರ ಒಕ್ಕೂಟದಿಂದ ಆಯೋಜಿಸಿದ್ದ ನಮ್ಮ ಕನ್ನಡ ಶಾಲೆ ಉಳಿಸಿ ಅಭಿಯಾನದ ರಾಜ್ಯಮಟ್ಟದ ಸಮಾವೇಶ ಉದ್ಘಾಟಿಸಿ ಮಾತನಾಡಿದರು.

ಅನುದಾನಕ್ಕೊಳಪಡಿಸುವುದು ಸರ್ಕಾರಕ್ಕೆ ದೊಡ್ಡ ಮೊತ್ತವಲ್ಲ. ಹಿಂದಿನ ಸರ್ಕಾರವೊಂದು ವಿಮಾನ, ವಿಶೇಷ ವಿಮಾನ ಹಾಗೂ ಹೆಲಿಕಾಪ್ಟರ್‌ಗಾಗಿ ₹ 98 ಕೋಟಿ ಖರ್ಚು ಮಾಡಿತ್ತು. ಹೀಗಾಗಿ ಇದೊಂದು ದೊಡ್ಡ ಮೊತ್ತವಲ್ಲ ಎಂದರು.

2002ರಲ್ಲಿ ನಡೆದಂತಹ ಮತ್ತೊಂದು ಹೋರಾಟ ಎಲ್ಲರೂ ಸೇರಿ ಮಾಡೋಣ. ಅಂದು ಮುಖ್ಯಮಂತ್ರಿ ಎಸ್.ಎಂ. ಕೃಷ್ಣ ಅವರು ಕರೆ ಮಾಡಿ ಎಸ್ಮಾ ಕಾಯ್ದೆಯಡಿ ಶಿಕ್ಷಕರನ್ನು ಬಂಧಿಸುವ ಎಚ್ಚರಿಕೆ ನೀಡಿದ್ದರು. ಆದರೂ ನಾವು ನಮ್ಮ ಹೋರಾಟದಿಂದ ಹಿಂದೆ ಸರಿಯಲಿಲ್ಲ. ಅಂತಹ ಹೋರಾಟ ಅಗತ್ಯ ವಾಗಿದ್ದು, ಎಲ್ಲ ತಾಲೂಕಿನಲ್ಲಿ ನಮ್ಮ ಸಂಘಟನೆಯಿದೆ. ನಮ್ಮ ಸಂಘಟನೆ ಸೇರಿದಂತೆ ಎಲ್ಲ ಸಂಘಟನೆಗಳು ನಿಮ್ಮ ಬೆಂಬಲಕ್ಕೆ ಬರಲಿವೆ. ಅಧಿವೇಶನದಲ್ಲಿ ಆಡಳಿತ ಹಾಗೂ ವಿಪಕ್ಷ ಸದಸ್ಯರೆಲ್ಲರನ್ನೂ ಸೇರಿಸಿ ಚರ್ಚೆಗೆ ಸೂಚಿಸಿದ್ದೇನೆ. ಈ ಅಧಿವೇಶನದಲ್ಲಿ ಇದಕ್ಕೊಂದು ಪರಿಹಾರ ಪಡೆಯುವ ನಿಟ್ಟಿನಲ್ಲಿ ಪ್ರಯತ್ನಿಸೋಣ ಎಂದರು.

ಸಂಘದ ಅಧ್ಯಕ್ಷ ಜಿ.ಸಿ. ಶಿವಪ್ಪ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಕರಾತ್ಮಕ ಭರವಸೆ ಇನ್ನೂ ಜೀವಂತ ಉಳಿದಿದೆ. ಉತ್ತರ ಕರ್ನಾಟಕ ಭಾಗದಲ್ಲಿ ಅತೀ ಹೆಚ್ಚು ಶಾಲೆಗಳಿದ್ದು, ಅನುದಾನ ಸಿಕ್ಕರೆ ಈ ಭಾಗಕ್ಕೆ ಹೆಚ್ಚು ಅನುಕೂಲವಾಗುತ್ತದೆ. ಈ ಅನುದಾನ ಕೊಟ್ಟರೆ ಕನ್ನಡ ಶಾಲೆ ಉಳಿಯುತ್ತವೆ. ಸರ್ಕಾರ ಆಂಗ್ಲ ಮಾಧ್ಯಮದ ಶಾಲೆ ತೆರೆಯುತ್ತಿರುವಾಗ ಇವರಿಗೆಲ್ಲಿದೆ ಮಾತೃಭಾಷೆ ಪ್ರೇಮ ಎಂದು ಪ್ರಶ್ನಿಸಿದರು.

**ಶಿಕ್ಷಕರ ಹಸಿವು:** ಸಂಡೂರಿನ ವಿರಕ್ತಮಠದ ಶ್ರೀಚನ್ನವೀರ ಸ್ವಾಮೀಜಿ ಮಾತನಾಡಿ, ಮಕ್ಕಳ ಹೊಟ್ಟೆಯ ಬಗ್ಗೆ ಯೋಚಿಸುವ ಸರ್ಕಾರಕ್ಕೆ ಶಿಕ್ಷಕರ ಹಸಿವು ಕಾಣಿಸುತ್ತಿಲ್ಲವೆ. ಖಾಸಗಿ ತಾರತಮ್ಯ ಮಾಡದೆ ಅನುದಾನ ನೀಡಿ ಕನ್ನಡ ಶಾಲೆ ಉಳಿಸಬೇಕು. ಅನುದಾನ ನೀಡದಿದ್ದರೆ ಸೇವೆ ಹೋಗಿ ಉದ್ಯಮವಾಗಿ ಗಣಿ ಮಾಲೀಕರು, ರಾಜಕಾರಣಿಗಳ ಸ್ವತ್ತಾಗಲಿದೆ. ಕನ್ನಡ ಸಾಹಿತ್ಯ ಸಮ್ಮೇಳನದಿಂದ ಕನ್ನಡ ಉಳಿಯುವುದಿಲ್ಲ, ಬೆಳೆಯುವುದಿಲ್ಲ ಎಂದು ಹೇಳಿದರು.

ಬೆಳಗಾವಿ ನಗರಾಭಿವೃದ್ಧಿ ಅಧ್ಯಕ್ಷ ಲಕ್ಷ್ಮಣರಾವ ಚಿಂಗಳೆ, ಎಸ್.ಎಸ್. ಮಠದ, ಅಧ್ಯಕ್ಷ ಜಿ.ಆರ್. ಭಟ್ಟ, ಎಂ.ಜಿ. ಕೋರಿಶೆಟ್ಟಿ, ಬೆಳಗಾಂವಕರ, ಕಾರ್ಯಾಧ್ಯಕ್ಷ ನಾಗರಾಜ , ಹೊರಗಿನಮಠ, ಸಲೀಂ ಕಿತ್ತೂರು ಸೇರಿದಂತೆ ಇನ್ನಿತರರಿದ್ದರು.

HUBBALLI Edition
Nov 23, 2024 Page No. 09
Powered by: erelego.com